ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER : ದಿನಾಂಕ : DATE : 28/6/19

# ಲೀಲಾದೇವಿ ಜೆಡಿಎಸ್ ಮಹಿಳಾ ಘಟಕದ ಅಧ್ಯಕ್ಷೆ

**ಬೆಂಗಳೂರು:** ಜೆಡಿಎಸ್ ರಾಜ್ಯ ಮಹಿಳಾ ಘಟಕದ ಅಧ್ಯಕ್ಷ ಸ್ಥಾನಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮಾಜಿ ಸಚಿವೆ ಲೀಲಾದೇವಿ ಆರ್.ಪ್ರಸಾದ್ ಅವರನ್ನು ಆಯ್ಕೆ ಮಾಡಲಾಗಿದೆ. ಬೆಂಗಳೂರು ಮಹಿಳಾ ಘಟಕದ ಅಧ್ಯಕ್ಷರಾಗಿ ಮಾನವ ಹಕ್ಕುಗಳ ಹೋರಾಟಗಾರ್ತಿ ರೂತ್ ಮನೋರಮಾ ನೇಮಕ ಮಾಡಿ ಜೆಡಿಎಸ್ ರಾಷ್ಟ್ರಾಧ್ಯಕ್ಷ ಎಚ್.ಡಿ.ದೇವೇಗೌಡ ಆದೇಶ ಹೊರಡಿಸಿದ್ದಾರೆ.





ಜೆಡಿಎಸ್ ಕಚೇರಿಯಲ್ಲಿ ಮಹಿಳಾ ಘಟಕದ ಅಧ್ಯಕ್ಷರ ನೇಮಕ ಕುರಿತು ನಡೆದ ಸಭೆಯಲ್ಲಿ ಸರ್ವಾನುಮತದಿಂದ ಮಾಜಿ ಸಚಿವೆ ಲೀಲಾದೇವಿ ಆರ್.ಪ್ರಸಾದ್ ಅವರನ್ನು ಆಯ್ಕೆ ಮಾಡಲಾಗಿದೆ. ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಪರಿಶಿಷ್ಟ ಸಮುದಾಯದವರನ್ನು ನೇಮಿಸಲು ಉದ್ದೇಶಿಸಿರುವ ದೇವೇಗೌಡರು, ಮಹಿಳಾ ಘಟಕದ ಜವಾಬ್ದಾರಿಯನ್ನು ವೀರಶೈವ ಲಿಂಗಾಯತ ಸಮುದಾಯಕ್ಕೆ ಸೇರಿರುವ ಡಾ. ಲೀಲಾದೇವಿ ಆರ್. ಪ್ರಸಾದ್ ಅವರಿಗೆ ವಹಿಸಿದ್ದಾರೆ.

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಮಾತನಾಡಿ, ಪಕ್ಷ ಸಂಘಟನೆಯನ್ನು ಬಲಗೊಳಿಸುವ ನಿಟ್ಟಿನಲ್ಲಿ ಎಲ್ಲ ಘಟಕಗಳಲ್ಲಿ ಹೊಸತನ ನೀಡಲಾಗುತ್ತಿದೆ. ಮಹಿಳಾ ಘಟಕದ ಪದಾಧಿಕಾರಿಗಳ ಜತೆ ಚರ್ಚಿಸಿ ಸರ್ವಾನುಮತದಿಂದ ನೂತನ ಅಧ್ಯಕ್ಷರನ್ನು ನೇಮಿಸಲಾಗಿದೆ ಎಂದರು.

**ಮಹಿಳಾ ಮೀಸಲಿಗಾಗಿ ಹೋರಾಟ:** ಚುನಾವಣೆಗಳಲ್ಲಿ ಶೇ.33ರಷ್ಟು ಮಹಿಳಾ ಮೀಸಲು ಜಾರಿಗೆ ತಮ್ಮ ನೇತೃತ್ವದಲ್ಲಿ ಧ್ವನಿಯೆತ್ತಲಾಗಿತ್ತು. ಪ್ರಸ್ತುತ ರಾಜ್ಯಸಭೆಯಲ್ಲಿ ಕಾಯಿದೆ ಜಾರಿಯಾಗಿದ್ದರೂ ಲೋಕಸಭೆಯಲ್ಲಿ ಇದನ್ನು ತಡೆಯಲಾಗಿದೆ. ಮಹಿಳಾ ಮೀಸಲು ಜಾರಿ ಕುರಿತು ಪ್ರಧಾನಿ ಮೋದಿ ನಿರ್ಧಾರವನ್ನು ಕೈಗೊಳ್ಳಬೇಕು. ದೇವೇಗೌಡರು ಒಪ್ಪಿಗೆ ನೀಡಿದಲ್ಲಿ ಮುಂದಿನ ದಿನಗಳಲ್ಲಿ ಮತ್ತೆ ಮಹಿಳಾ ಮೀಸಲು ಕುರಿತು ಹೋರಾಟ ಮುಂದುವರಿಸುತ್ತೇನೆ ಎಂದು ಜೆಡಿಎಸ್‌ನ ಮಹಿಳಾ ಘಟಕದ ನೂತನ ಅಧ್ಯಕ್ಷೆ ಲೀಲಾದೇವಿ ಆರ್.ಪ್ರಸಾದ್ ಹೇಳಿದರು.

2